**ಕರ್ನಾಟಕ ಸರ್ಕಾರ**

ಸಂಖ್ಯೆ: ಪಪೂಶಿ. ಆಶಾ (ನಿ). ಪರೀಕ್ಷೆ 1/2016-17.

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡ ರಸ್ತೆ, ಮಲ್ಲೇಶ್ವರಂ,
ಬೆಂಗಳೂರು-560 001.
ದಿನಾಂಕ: 10-06-2016.

ಅತಿ ತುರ್ತು

**ಸುತ್ತೋಲೆ**

ಮಾರ್ಚ್ 2016 ದ್ವಿತೀಯ ಪಿ ಯು ಸಿ ಪರೀಕ್ಷೆಯ ಫಲಿತಾಂಶವನ್ನು ಪ್ರಕಟಿಸಿದ ನಂತರ ವಿದ್ಯಾರ್ಥಿಗಳಿಗೆ ಸ್ಕ್ಯಾನ್ ಮಾಡಿದ ಉತ್ತರ ಪತ್ರಿಕೆಗಳನ್ನು ಒದಗಿಸಿದ ನಂತರ ಮರು ಎಣಿಕೆಗೆ ಮತ್ತು ಮೌಲ್ಯ ಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಸ್ಕ್ಯಾನ್ ಮಾಡಿದ ಉತ್ತರ ಪತ್ರಿಕೆಗಳಿಗಾಗಿ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳಿಗೆ ಸ್ಕ್ಯಾನ್ ಮಾಡಿದ ಉತ್ತರ ಪತ್ರಿಕೆಗಳನ್ನು ಇ-ಮೇಲ್ ಮೂಲಕ ಕಳುಹಿಸಲಾಗಿದೆ. ಆದಾಗ್ಯೂ ಹಲವು ವಿದ್ಯಾರ್ಥಿಗಳಿಗೆ ವಿವಿಧ ಕಾರಣಗಳಿಂದ ಉತ್ತರ ಪತ್ರಿಕೆಗಳು ತಲುಪದಿರುವ ಹಿನ್ನೆಲೆಯಲ್ಲಿ ಸ್ಕ್ಯಾನ್ ಮಾಡಿದ ಉತ್ತರ ಪತ್ರಿಕೆಗಳನ್ನು download ಮಾಡಿಕೊಳ್ಳಲಾಗದ ವಿದ್ಯಾರ್ಥಿಗಳು ನೋಂದಣಿ ಸಂಖ್ಯೆ, ಸ್ಕ್ಯಾನ್ ಮಾಡಿದ ಉತ್ತರ ಪತ್ರಿಕೆಗಳಿಗಾಗಿ ಅರ್ಜಿ ಸಲ್ಲಿಸಿದ ವಿಷಯ/ಗಳು (Subjects), ಮೊಬೈಲ್ ಪೋನ್ ನಂಬರ್, ಮತ್ತು ತಮ್ಮ ಇ-ಮೇಲ್ ವಿಳಾಸಗಳ ಮಾಹಿತಿಗಳೊಂದಿಗೆ ಜಿಲ್ಲಾ ಉಪನಿರ್ದೇಶಕರನ್ನು ಸಂಪರ್ಕಿಸಲು ಅವಕಾಶ ಕಲ್ಪಿಸಲಾಗಿದೆ. ಆದುದರಿಂದ ಜಿಲ್ಲಾ ಉಪನಿರ್ದೇಶಕರು ದಿನಾಂಕ: 11-06-2016 ಮತ್ತು 12-06-2016ರಂದು ಜಿಲ್ಲಾ ಕಛೇರಿಗಳನ್ನು ತೆರದಿರಲು ಹಾಗು ಅಹವಾಲನ್ನು ಸ್ವೀಕರಿಸಿ ಕ್ರೋಢೀಕರಿಸಿದ ಮಾಹಿತಿಯನ್ನು ಬೆಳಗಿನ ಅವಧಿ 12 ಗಂಟೆಗೆ ಒಮ್ಮೆ ಮತ್ತು ಎರಡನೇ ಬಾರಿ ಸಂಜೆ 5 ಗಂಟೆಗೆ ಸದರಿ ಎರಡೂ ದಿನಗಳಂದು *directorpueb@gmail.com* ಗೆ ಕಳುಹಿಸುವ ವ್ಯವಸ್ಥೆ ಮಾಡಲು ಈ ಮೂಲಕ ತಿಳಿಸಿದೆ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರ ಗಮನಕ್ಕೆ.